# ***Form No.4.***

# ***Deposition Sheet( R.P.52)***

ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಹೆಚ್ಚುವರಿ ಮುಖ್ಯ
ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಾರ್ಕಳ.

**CC 217/2025**

**CW-1**

**PW-1**

| | | |
|---|---|---|
| ಸಾಕ್ಷಿಯ ಹೆಸರು | ಃ | ರಾಮಕೃಷ್ಣ ನಾಯಕ್ |
| ತಂದೆ ಹೆಸರು | ಃ | ಹರಿಯಪ್ಪ ನಾಯಕ್ |
| ಪ್ರಾಯ | ಃ | **62** ವರ್ಷ |
| ಉದ್ಯೋಗ | ಃ | ವ್ಯಾಪಾರ |
| ವಾಸ | ಃ | ಅಜೆಕಾರು |

ದಿನಾಂಕ **: 05.12.2025** ರಂದು ಪಿಡಬ್ಲ್ಯೂ - 1 /ಸಿಡಬ್ಲ್ಯೂ - 1 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಹಿರಿಯ ಸ.ಸ.ಅ. ರವರಿಂದಃ

ಮೃತ ಜಯಲಕ್ಷ್ಮಿ ನಾಯಕ್ ರವರು ನನ್ನ ಹೆಂಡತಿಯ ಅಕ್ಕ. ದಿಃ 27.02.2025 ರಂದು ಅಪಘಾತವಾಗಿ, ಅದರಲ್ಲಿ ಮೃತಪಟ್ಟಿರುತ್ತಾರೆ. ಅಪಘಾತದ ಬಗ್ಗೆ ಯಾರೋ ಒಬ್ಬರು ನನಗೆ ಕರೆ ಮಾಡಿ ತಿಳಿಸಿದ್ದು, ನಾನು ಅಪಘಾತದ ಸ್ಥಳಕ್ಕೆ

ಹೋಗಿರುತ್ತೇನೆ. ಅಪಘಾತದ ಸ್ಥಳದಲ್ಲಿ ಜಯಲಕ್ಷ್ಮಿಯವರು ಇದ್ದು, ಅವರಿಗೆ ಒಳಭಾಗದಲ್ಲಿ ಪೆಟ್ಟಾಗಿದ್ದು, ನಾನು ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ಅಪಘಾತವು ಹೇಗೆ ಆಗಿದೆ ಎಂದು ನಾನು ಕೇಳಿದ್ದು, ನನಗೆಯಾರೂ ಮಾಹಿತಿ ನೀಡಿರುವುದಿಲ್ಲ. ನನಗೆ ಆರೋಪಿಯ ಪರಿಚಯವಿದೆ. ಆದರೆ ಅಪಘಾತದ ಸ್ಥಳದಲ್ಲಿ ಅವರು ಇರಲಿಲ್ಲ. ಈಗ ದೂರನ್ನು ನೋಡುತ್ತಿದ್ದು ಅದರಲ್ಲಿನ ನನ್ನ ಸಹಿಯನ್ನು ಒಪ್ಪಿಕೊಂಡ ಕಾರಣ, ದೂರನ್ನು ನಿಪಿ - 1 ಎಂದು, ನನ್ನ ಸಹಿಯನ್ನು ನಿಪಿ - 1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲೀಸರು ಪಡೆದುಕೊಂಡಿರುತ್ತಾರೆ. ನಿಪಿ - 1 ರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ತಿಳಿದಿಲ್ಲ. ನಂತರ ನಾನು ಯಾವುದೇ ಮರುಹೇಳಿಕೆಯನ್ನು ನೀಡಿರುವುದಿಲ್ಲ.

ಈ ಹಂತದಲ್ಲಿ ಸಾಕ್ಷಿದಾರರನ್ನು ಬಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಬೇಕು ಎಂದು ಹಿರಿಯ.ಸ.ಸ.ಅ. ರವರು ಕೋರಿದ್ದು, ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.

**CC 217/2025/**
**CW1**
**PW1**

<u>ಪಾಟೀ ಸವಾಲುಃ</u> ಹಿರಿಯ ಸ.ಸ.ಅ. ರವರಿಂದಃ

ಅಪಘಾತದ ಮಾಹಿತಿ ಬಂದಾಗ ನಾನು ಸ್ಥಳಕ್ಕೆ ಹೋಗಿದ್ದು, ಅಲ್ಲಿ ಆರೋಪಿ ಮತ್ತು ಆರೋಪಿಯ ವಾಹನ ಕೆಎ 20 – ಇವೈ - 7550 ಸ್ಥಳದಲ್ಲಿ ಇತ್ತು ಎಂದರೆ ಸರಿಯಲ್ಲ. ಸ್ಥಳದಲ್ಲಿ ಇದ್ದ ಜನರಲ್ಲಿ ಅಪಘಾತದ ಬಗ್ಗೆ ವಿಚಾರಿಸಿದಾಗ, ಆರೋಪಿಯು ಅತೀ ವೇಗ ಹಾಗೂ ನಿರ್ಲಕ್ಷ್ಯತೆಯಿಂದ ತನ್ನ ವಾಹನವನ್ನು ಚಲಾಯಿಸಿ, ರಸ್ತೆಯ ತೀರಾ ಎಡಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಜಯಲಕ್ಷ್ಮಿಯವರಿಗೆ ಡಿಕ್ಕಿಪಡಿಸಿರುತ್ತಾರೆ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಯು ಅಪಘಾತ ಪಡಿಸಿದ್ದಾರೆ ಎಂದ ಕಾರಣ ದಿಃ 03.03.2025 ರಂದು ನಿಪಿ - 1 ರಂತೆ ಪೋಲೀಸರಿಗೆ ದೂರನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯು ನನ್ನ ಸಂಬಂಧಿಕರಾಗಿದ್ದು, ಮತ್ತು ಅಪಘಾತದಿಂದ ಆದ ಖರ್ಚಗಳನ್ನು ಭರಿಸುತ್ತೇನೆ ಎಂದು ಹೇಳಿದ ಕಾರಣ ನಾನು ತಡವಾಗಿ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಅಪಘಾತಕ್ಕೊಳಗಾದಂತಹ ಜಯಲಕ್ಷ್ಮಿ ಯವರು ದಿಃ 01.04.2025 ರಂದು ಆಸ್ಪತ್ರೆಯಲ್ಲಿ ಮರಣಹೊಂದಿರುತ್ತಾರೆ ಎಂದರೆ ಸರಿ. ಈ ವಿಚಾರವಾಗಿ ನಾನು ಮರುಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನನ್ನ ಮರುಹೇಳಿಕೆಯನ್ನು ನಿಪಿ - 2 ಎಂದು ಗುರುತಿಸಲಾಯಿತು. ಆರೋಪಿಯ ತಪ್ಪಿನಿಂದ ಅಪಘಾತವಾಗಿದ್ದರೂ

ಸಹಾ ಆತನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಶ್ರೀ ಕೆ.ಹೆಚ್.ಎ. ಆರೋಪಿ ಪರ ವಕೀಲರಿಂದ ಇರುವುದಿಲ್ಲ.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ.

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಸಿಜೆಎಂ.,

ಕಾರ್ಕಳ.